# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 750(958) |
| ಸದಸ್ಯರ ಹೆಸರು | : | ಡಾ: ಚಂದ್ರಶೇಖರ್ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 15.12.2025 |
| ಉತ್ತರಿಸುವವರು | : | ಮಾನ್ಯ ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಸರ್ಕಾರಿ ಪದವಿ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳನ್ನು ತೆಗೆದು ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | 2024-25ನೇ ಶೈಕ್ಷಣಿಕ ಸಾಲಿನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪ್ರಸ್ತುತ 2025-26ನೇ ಸಾಲಿಗೆ ತಾತ್ಕಾಲಿಕವಾಗಿ ಮುಂದುವರೆಸಲಾಗಿತ್ತು.<br><br>ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದಂತೆ, ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಸಲ್ಲಿಕೆಯಾಗಿದ್ದ ರಿಟ್ ಅರ್ಜಿ ಸಂಖ್ಯೆ:23600/2023ಕ್ಕೆ ಮಾನ್ಯ ನ್ಯಾಯಾಲಯವು ದಿನಾಂಕ:05.09.2024ರಂದು ತೀರ್ಪು ನೀಡಿ, ಅತಿಥಿ ಉಪನ್ಯಾಸಕರ ಆಯ್ಕೆಗೆ ಯು.ಜಿ.ಸಿ. ವಿದ್ಯಾರ್ಹತೆ (ಎನ್‌ಇಟಿ/ಎಸ್‌ಎಲ್‌ಇಟಿ /ಪಿಹೆಚ್.ಡಿ) ಮಾನದಂಡವನ್ನು ಅನುಸರಿಸುವಂತೆ |
| (ಆ) | ಬಂದಿದ್ದರೆ, ಅವರನ್ನು ಪುನರ್ ನೇಮಕ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ಆದೇಶಿಸಲಾಗಿದ್ದಕ್ಕೆ ಇಲಾಖಾ ವತಿಯಿಂದ ದಾಖಲಿಸಲಾಗಿದ್ದ ರಿಟ್ ಅಪೀಲು ಸಂಖ್ಯೆ:1578/2024ರಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ವಿಭಾಗೀಯ ಪೀಠವು ದಿನಾಂಕ:08.10.2025ರಂದು ನೀಡಿರುವ ತೀರ್ಪಿನಲ್ಲಿ 2025-26ನೇ ಸಾಲಿನಿಂದ ಅತಿಥಿ ಉಪನ್ಯಾಸಕರನ್ನು ಯು.ಜಿ.ಸಿ. ನಿಯಮಗಳನ್ವಯ ನೇಮಕ ಮಾಡಿಕೊಳ್ಳುವಂತೆ ನೀಡಿರುವ ನಿರ್ದೇಶನದನ್ವಯ ಯು.ಜಿ.ಸಿ. ವಿದ್ಯಾರ್ಹತೆ(ಎನ್‌ಇಟಿ/ಎಸ್‌ಎಲ್‌ಇಟಿ/ಪಿಹೆಚ್.ಡಿ) ಮಾನದಂಡವನ್ನು ಅನುಸರಿಸಿ, ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯ ಮೂಲಕ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಲು ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ:ಇಡಿ 437 ಡಿಸಿಇ 2025(ಇ)**

(ಡಾ. ಎಂ.ಸಿ ಸುಧಾಕರ್)
ಉನ್ನತ ಶಿಕ್ಷಣ ಸಚಿವರು